DEPARTMENT / SUBJECT:

NAME OF THE NEWS PAPER: DATE : 27/10/2017

# ಸಿದ್ದು ಕ್ಷಮೆ ಕೇಳದಿದ್ದರೆ ಹಕ್ಕುಚ್ಯುತಿ ಮಂಡನೆ

27/10/17

ಹುಬ್ಬಳ್ಳಿ: ಸ್ಪೀಕರ್ ಬಗ್ಗೆ ಏಕವಚನದಲ್ಲಿ ಮಾತನಾಡಿರುವ ಕುರಿತು ವಿಧಾನಸಭೆ ವಿಪಕ್ಷ ನಾಯಕ ಸಿದ್ದರಾಮಯ್ಯನವರು ನಾಡಿನ ಜನರ ಕ್ಷಮೆ ಕೇಳಬೇಕು. ಇಲ್ಲವಾದರೆ ಅವರ ವಿರುದ್ಧ ವಿಧಾನಸಭೆಯಲ್ಲಿ ಹಕ್ಕು ಚ್ಯುತಿ ಮಂಡನೆ



ಮಾಡುತ್ತೇವೆ ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ತಿಳಿಸಿದರು. ಸುದ್ದಿಗಾರ ರೊಂದಿಗೆ ಮಾತನಾಡಿದ ಅವರು, ದೇಶದ ಇತಿಹಾಸದಲ್ಲಿ ಸ್ಪೀಕರ್ ಬಗ್ಗೆ ಯಾರೂ ಈ ರೀತಿ ಹಗುರವಾಗಿ ಮಾತನಾಡಿ ರಲಿಲ್ಲ. ಅದು ಅವರಿಗೆ ಎಷ್ಟರ ಮಟ್ಟಿಗೆ ಶೋಭೆ ತರುತ್ತದ ಗೊತ್ತಿಲ್ಲ. ಜನ ಅವರಿಗೆ ತಕ್ಕ ಪಾಠ ಕಲಿಸಲಿದ್ದಾರೆ. ಇನ್ನಾದರೂ ಅವರು ವಿಪಕ್ಷ ನಾಯಕರಾಗಿ ನಾಲಿಗೆ ಬಿಗಿ ಹಿಡಿದು ಮಾತನಾಡಲಿ ಎಂದರು. ಸಾವರ್ಕರ್ ದೇಶಕ್ಕಾಗಿ ಸರ್ವಸ್ವವನ್ನೂ ತ್ಯಾಗ ಮಾಡಿದ್ದರು. ಅಂಡಮಾನ್ ನಿಕೋಬಾರ್‌ಗೆ ಹೋಗಿ ಕರಿನೀರಿನ ಶಿಕ್ಷೆ ಅನುಭವಿಸಿದ್ದರು. ಆದರೆ, ಸಿದ್ದರಾಮಯ್ಯನವರಿಗೆ ಅವರ ಬಗ್ಗೆ ಎಬಿಸಿಡಿ ಗೊತ್ತಿಲ್ಲ ಎಂದರು.

## ಅನರ್ಹ ಶಾಸಕರ ಕುರಿತ ತೀರ್ಪು ನಮಗೆ ಮುಖ್ಯ

ಚಿತ್ರದುರ್ಗ: ಅನರ್ಹ ಶಾಸಕರ ಕುರಿತ ತೀರ್ಪು ನಮಗೆ ಬಹಳ ಮುಖ್ಯವಾಗಿದ್ದು, ಅದಕ್ಕಾಗಿ ಕಾಯುತ್ತಿದ್ದೇವೆ ಎಂದು ಶಿಕ್ಷಣ ಸಚಿವ ಎಸ್.ಸುರೇಶ್‌ಕುಮಾರ್ ಹೇಳಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜೀನಾಮೆ ನೀಡಿದ ಶಾಸಕರ ಬಗ್ಗೆ ಹಿಂದಿನ ಸ್ಪೀಕರ್ ತೆಗೆದುಕೊಂಡ ನಿರ್ಧಾರದ ಬಗ್ಗೆ ನಮ್ಮ ಅಸಮಾಧಾನವಿದೆ. ಈ ತೀರ್ಪು ಸರಿಯಲ್ಲ ಎನ್ನುವುದು ಮೊದಲಿನಿಂದಲೂ ನಮ್ಮ ವಾದವಾಗಿತ್ತು ಎಂದರು. ಕೇಂದ್ರ ಸರ್ಕಾರ ಆರ್‌ಸಿಇಪಿ ಒಪ್ಪಂದಕ್ಕೆ ಸಹಿ ಹಾಕುವ ಕುರಿತ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ರೈತರ ಹಿತ ಕಾಯುವುದು ನಮ್ಮ ಮೊದಲ ಆದ್ಯತೆ. ಈ ಬಗ್ಗೆ ಸಂಪುಟದಲ್ಲಿ ಚರ್ಚಿಸಿ ಕೇಂದ್ರ ಸರ್ಕಾರಕ್ಕೆ ತಿಳಿಸುತ್ತೇವೆ. ರೈತರಿಗೆ ತೊಂದರೆಯಾಗದಂತೆ ಕೇಂದ್ರದ ಗಮನ ಸೆಳೆಯುತ್ತೇವೆ ಎಂದರು.

ನೆರೆಯಿಂದ ಬಿದ್ದಿರುವ ಶಾಲೆಗಳ ಪುನರ್ನಿರ್ಮಾಣಕ್ಕೆ 540 ಕೋಟಿ ರೂ.ಬೇಕಾಗಬಹುದು. ಈ ಶಾಲೆಗಳನ್ನು ಸರಿಪಡಿಸುವುದು ನಮ್ಮ ಮೊದಲ ಆದ್ಯತೆ. ಶತಮಾನ ಕಳೆದಿರುವ ಹೆರಿಟೇಜ್ ಶಾಲೆಗಳ ಬಗ್ಗೆ ಮುಂದಿನ ದಿನಗಳಲ್ಲಿ ತೀರ್ಮಾನ ತೆಗೆದುಕೊಳ್ಳುತ್ತೇವೆ ಎಂದರು.

> ಸ್ಪೀಕರ್ ಬಗ್ಗೆ ಸಿದ್ದರಾಮಯ್ಯ ಏಕವಚನ ಬಳಕೆ ಮಾಡುವುದು ಸರಿಯಲ್ಲ. ನಮಗೂ ಏಕವಚನ, ಬಹುವಚನಗಳು ಗೊತ್ತು. ಆದರೆ, ಸಿದ್ದರಾಮಯ್ಯ ವ್ಯಾಕರಣದ ಮೇಷ್ಟ್ರು. ಅವರಿಗೆ ಏಕವಚನ ಮಾತ್ರ ಗೊತ್ತಿದೆ. ವ್ಯಾಕರಣದ ವ್ಯತ್ಯಾಸ ಗೊತ್ತಿಲ್ಲದೆ ಮಾತನಾಡುತ್ತಿದ್ದಾರೆ.



• ಎಸ್.ಸುರೇಶ್‌ಕುಮಾರ್, ಶಿಕ್ಷಣ ಸಚಿವ

## ಕಾಂಗ್ರೆಸ್ ಮುಕ್ತ ಭಾರತ ಸನ್ನಿಹಿತ: ಯಡಿಯೂರಪ್ಪ

'ಕಾಂಗ್ರೆಸ್ ಮುಕ್ತ ಭಾರತ' ಆಗಬೇಕೆಂಬ ಕನಸು ಹಾಗೂ ಮಹಾತ್ಮಾ ಗಾಂಧಿ ಅವರ ಚಿಂತನೆ ಸಾಕಾರಗೊಳ್ಳುವ ಕಾಲ ಸನ್ನಿಹಿತವಾಗಿದೆ ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಹಾರಾಷ್ಟ್ರ ಹರ್ಯಾಣಗಳಲ್ಲಿನ ಚುನಾವಣಾ ಫಲಿತಾಂಶದ ಬಗ್ಗೆ ಈಗಾಗಲೇ ಪ್ರಧಾನಿ ತಮ್ಮ ಅಭಿಪ್ರಾಯ ತಿಳಿಸಿದ್ದಾರೆ. ಪಕ್ಷಕ್ಕೆ ಯಾವುದೇ ಹಿನ್ನಡೆಯಾಗಿಲ್ಲ. ಆದರೆ, ಕಾಂಗ್ರೆಸ್ ಯಾರೂ ಹೇಳೋರು, ಕೇಳೋರು ಇಲ್ಲದ ನಾಯಕತ್ವದ ಪಕ್ಷವಾಗಿದೆ. ಕಾಂಗ್ರೆಸ್ ಮುಕ್ತ ಭಾರತ ಆಗಬೇಕೆಂಬ ಕನಸು ಹಾಗೂ ಮಹಾತ್ಮಾ ಗಾಂಧಿ ಅವರ ಚಿಂತನೆ ಸಾಕಾರಗೊಳ್ಳುವ ಕಾಲ ಸನ್ನಿಹಿತವಾಗಿದೆ ಎಂದರು.

**ನೆರೆ ಪರಿಹಾರಕ್ಕೆ ಹಣಕಾಸಿನ ತೊಂದರೆಯಿಲ್ಲ:** ಅತಿವೃಷ್ಟಿಯಿಂದ ಮತ್ತೊಮ್ಮೆ ಜನ ತೊಂದರೆಗೊಳಗಾಗಿದ್ದು ಅವರಿಗೆಲ್ಲ ಹಿಂದಿನಂತೆ ಸವಲತ್ತು ನೀಡಿ ನೆರವಿಗೆ ಬರುವಂತ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ. ಹಣ ಬಿಡುಗಡೆ ಮಾಡಲಾಗಿದೆ. ನೆರೆ ಪರಿಹಾರಕ್ಕೆ ಹಣಕಾಸಿನ ತೊಂದರೆಯಿಲ್ಲ. ನೆರೆ ಸಂತ್ರಸ್ತರ ಸಮಸ್ಯೆ ಬಗೆಹರಿಸಲು ಗಮನ ಹರಿಸಲಾಗಿದೆ. ಹಣಕಾಸು ಸಮಸ್ಯೆಯಿದ್ದರೂ ನೆರೆ ಸಂತ್ರಸ್ತರಿಗೆ ಮನೆ ನಿರ್ಮಿಸಲು 5 ಲಕ್ಷ ರೂ. ಕೊಡಲಾಗುತ್ತಿದೆ. ಮೊದಲ ಹಂತವಾಗಿ 1ಲಕ್ಷ ರೂ. ಕೊಡಲಾಗುತ್ತಿದೆ. ಸಂತ್ರಸ್ತರಿಗೆ ನಮ್ಮ ಸರಕಾರ ಕೊಟ್ಟಿರುವ ಸವಲತ್ತನ್ನು ಯಾರೂ ಮಾಡಿಲ್ಲ. ಕೆಲವರು ರಾಜಕೀಯವಾಗಿ ಇಲ್ಲಸಲ್ಲದ್ದನ್ನು ಹೇಳುತ್ತಿದ್ದಾರೆ ಎಂದು ಆರೋಪಿಸಿದರು.

## ಸುಪ್ರೀಂ ತೀರ್ಪು ನೋಡಿ ಅಭ್ಯರ್ಥಿಗಳ ಆಯ್ಕೆ

ಹುಬ್ಬಳ್ಳಿ: ಉಪ ಚುನಾವಣೆಗೆ ಎಲ್ಲ ಸಿದ್ಧತೆ ಮಾಡಿಕೊಂಡಿದ್ದು, ಬಹುತೇಕ ಅಭ್ಯರ್ಥಿಗಳ ಆಯ್ಕೆ ಅಂತಿಮ ಹಂತ ತಲುಪಿದೆ. ಸುಪ್ರೀಂಕೋರ್ಟ್ ತೀರ್ಪು ನೋಡಿಕೊಂಡು ಅಭ್ಯರ್ಥಿಗಳ ಆಯ್ಕೆ ಕುರಿತು ಮುಂದಿನ ನಿರ್ಧಾರ ಕೈಗೊಳ್ಳಲಾಗುವುದು ಎಂದು ವಿಪಕ್ಷ ನಾಯಕ ಸಿದ್ದರಾಮಯ್ಯ ಹೇಳಿದರು.

ಶನಿವಾರ ಸುದ್ದಿಗಾರರೊಂದಿಗೆ ಮಾತನಾಡಿ, ಬಿಜೆಪಿಯವರು ನಮ್ಮ ಶಾಸಕರನ್ನು ಕರೆದೊಯ್ದು ಆಕಾಶ ತೋರಿಸಿದ್ದರು. ನಡುನೀರಲ್ಲಿ ಕೈಬಿಟ್ಟಿದ್ದಾರೆ. ನಿಮಗೆ ಅವರು ಸಮಾಧಿ ಮಾಡುತ್ತಾರೆಂದು ಅವರಿಗೆ ಮೊದಲೇ ಹೇಳಿದ್ದೆವು. ಆದರೆ, ಅವರು ಕೇಳಲಿಲ್ಲ ಎಂದರು.

**ಪರಿಹಾರ ವಿತರಣೆಯಲ್ಲಿ ತಾರತಮ್ಯ:** ರಾಜ್ಯ ಸರಕಾರ ಪ್ರವಾಹ ಪೀಡಿತರಿಗೆ ಸೂಕ್ತ ಪರಿಹಾರ ಕೊಟ್ಟಿಲ್ಲ. ಪರಿಹಾರ ವಿತರಣೆಯಲ್ಲಿ ತಾರತಮ್ಯವಾಗಿದೆ. ಪರಿಹಾರ ಸಂತ್ರಸ್ತರ ಪಟ್ಟಿಯಿಂದ ಬಹಳಷ್ಟು ಜನ ಬಿಟ್ಟು ಹೋಗಿದ್ದಾರೆ. ತಾತ್ಕಾಲಿಕ ಶೆಡ್‌ಗಳನ್ನು ನಿರ್ಮಿಸಿಲ್ಲ. ಬಿಜೆಪಿಯವರು ಮೋಜು ಮಾಡುತ್ತಿದ್ದಾರೆ. ನೆರೆ ಪರಿಹಾರ ವಿಳಂಬ ಖಂಡಿಸಿ ಪಾದಯಾತ್ರೆ ಮಾಡುವ ಯೋಚನೆಯಿದೆ, ಇನ್ನೂ ಅಂತಿಮವಾಗಿಲ್ಲ ಎಂದರು.

### ಹಕ್ಕುಚ್ಯುತಿ ಮಂಡಿಸಲಿ ಬಿಡಿ

ಅಧಿವೇಶನದಲ್ಲಿ ಮಾತನಾಡಲು ವಿಪಕ್ಷ ನಾಯಕರಿಗೆ ಸ್ಪೀಕರ್ ಅವಕಾಶ ಕೊಡಲಿಲ್ಲ. ಹೀಗಾಗಿ, ಸ್ಪೀಕರ್ ನಡೆ ಖಂಡಿಸಿದ್ದೇನೆ. ಬೇಕಾದರೆ ಸಿಎಂ ಯಡಿಯೂರಪ್ಪ ಅವರು, ನನ್ನ ವಿರುದ್ಧ ವಿಧಾನಸಭೆಯಲ್ಲಿ ಹಕ್ಕುಚ್ಯುತಿ ಮಂಡಿಸಲಿ ಬಿಡಿ. ಸದನದಲ್ಲೇ ಉತ್ತರಿಸುವೆ ಎಂದು ಸಿದ್ದರಾಮಯ್ಯ ಪ್ರತಿಕ್ರಿಯಿಸಿದ್ದಾರೆ. ನಗರದಲ್ಲಿ ಶನಿವಾರ ಯಡಿಯೂರಪ್ಪ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ತಪ್ಪೇ ಮಾಡಿಲ್ಲವೆಂದ ಮೇಲೆ ಕ್ಷಮೆ ಏಕೆ ಕೇಳಲಿ' ಎಂದು ಪ್ರಶ್ನಿಸಿದರು. 'ಸ್ಪೀಕರ್‌ಗೆ ಹೇಗೆ ಗೌರವ ಕೊಡಬೇಕೆಂಬ ಬಗ್ಗೆ ಯಡಿಯೂರಪ್ಪನವರಿಂದ ಪಾಠ ಕಲಿಯಬೇಕಿಲ್ಲ. 40 ವರ್ಷದಿಂದ ರಾಜಕೀಯದಲ್ಲಿದ್ದು, ಯಾರಿಗೆ, ಯಾವ ರೀತಿ ಗೌರವ ಕೊಡಬೇಕೆಂಬುದು ನನಗೆ ಗೊತ್ತು' ಎಂದರು.

> ಕೆಪಿಸಿಸಿ ಅಧ್ಯಕ್ಷರ ಆಯ್ಕೆ ಬಗ್ಗೆ ಹೈಕಮಾಂಡ್ ತೀರ್ಮಾನ ಮಾಡುತ್ತದೆ. ಡಿ.ಕೆ.ಶಿವಕುಮಾರ್ ಅವರು ಕೆಪಿಸಿಸಿ ಅಧ್ಯಕ್ಷರಾಗುತ್ತಾರೆ ಅನ್ನೋದು ಕೇವಲ ವದಂತಿ. ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಪ್ರಸ್ತಾಪ ಸದ್ಯಕ್ಕಿಲ್ಲ. ಬಿಜೆಪಿಯ ಮೂರು ಡಿಸಿಎಂಗಳ ಬಗ್ಗೆ ಉಮೇಶ ಕತ್ತಿ ಸತ್ಯ ಹೇಳಿದ್ದಾರೆ. ಜನರು ಬಿಜೆಪಿಗೆ ತಕ್ಕ ಪಾಠ ಕಲಿಸಲು ಕಾಯುತ್ತಿದ್ದಾರೆ.

• ಸಿದ್ದರಾಮಯ್ಯ, ವಿಪಕ್ಷ ನಾಯಕ.